# ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 434
02. ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)

03. ಉತ್ತರಿಸುವ ದಿನಾಂಕ : 07.12.2023
04. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಮೆಜೆಸ್ಟಿಕ್ ಮತ್ತು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳ ಸುತ್ತ–ಮುತ್ತಲಿನ ವಿವಿಧ ಸ್ಥಳಗಳಿಗೆ ಸಂಪರ್ಕ ಕಲ್ಪಿಸುವ ಹಲವು ಅಂಡರ್‌ಪಾಸ್ ಮತ್ತು ಫ್ಲೈಓವರ್‌ನಲ್ಲಿ ಅಕ್ರಮ ಚಟುವಟಿಕೆಗಳು, ಸಭ್ಯಸ್ಥರು ಮುಜುಗರದಿಂದ ಓಡಾಡುವಂತಹ ಅಹಿತಕರ ಘಟನೆಗಳು, ಸಾರ್ವಜನಿಕರನ್ನು ತಡೆದು ಹಣ ವಸೂಲು ಮಾಡುವುದು ಹಾಗೂ ಇನ್ನಿತರ ಅನುಚಿತ ಘಟನೆಗಳು ದಿನಂಪ್ರತಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಮೆಜೆಸ್ಟಿಕ್ ಮತ್ತು ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಗಳ ಸುತ್ತ–ಮುತ್ತಲಿನ ವಿವಿಧ ಸ್ಥಳಗಳಿಗೆ ಸಂಪರ್ಕ ಕಲ್ಪಿಸುವ ಅಂಡರ್‌ಪಾಸ್ ಮತ್ತು ಫ್ಲೈಓವರ್‌ನಲ್ಲಿ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟುವ ಸಲುವಾಗಿ ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>➢ ಮೆಜೆಸ್ಟಿಕ್ ಮತ್ತು ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಗಳ ಪೊಲೀಸ್ ಠಾಣಾ ಸರಹದ್ದಿನ (ಉಪ್ಪಾರಪೇಟೆ ಪೊಲೀಸ್ ಠಾಣೆ) ರೈಲ್ವೇ ನಿಲ್ದಾಣದ ಕಡೆಯಿಂದ ಮೆಜೆಸ್ಟಿಕ್ ಮತ್ತು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳಿಗೆ ಸಂಪರ್ಕ ಕಲ್ಪಿಸುವ ಅಂಡರ್‌ಪಾಸ್ ಮತ್ತು ಫ್ಲೈಓವರ್‌ನಲ್ಲಿ ಅಕ್ರಮ ಚಟುವಟಿಕೆಗಳು, ಪ್ರಯಾಣಿಕರು/ ಸಾರ್ವಜನಿಕರು ಮುಜುಗರದಿಂದ ಓಡಾಡುವಂತಹ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಿ, ಪ್ರತಿದಿನ ಅಪರಾಧ ವಿಭಾಗದ ಸಿಬ್ಬಂದಿ ಹಾಗೂ ಬೀಟ್ ಕರ್ತವ್ಯದ ಸಿಬ್ಬಂದಿಗಳನ್ನು ನೇಮಕ ಮಾಡಿ, ಫುಟ್ ಪೆಟ್ರೋಲಿಂಗ್ ವ್ಯವಸ್ಥೆ ಮಾಡಲಾಗಿದೆ. ಅಲ್ಲದೆ, ಅವರುಗಳ ಮೇಲುಸ್ತುವಾರಿಯಾಗಿ ಒಬ್ಬ ಪಿಎಸ್‌ಐ ದರ್ಜೆಯ ಅಧಿಕಾರಿಯವರನ್ನು ನೇಮಕ ಮಾಡಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮ ವಹಿಸಲಾಗಿದೆ.<br>➢ ಮಂಗಳಮುಖಿಯರು ಸಾರ್ವಜನಿಕರನ್ನು ತಡೆದು ಹಣ ವಸೂಲು ಮಾಡುವುದು ಹಾಗೂ ಇನ್ನಿತರ ಅನುಚಿತ ಘಟನೆಗಳಿಗೆ ಸಂಬಂಧಿಸಿದಂತೆ, ಅಂತಹ ಕೃತ್ಯಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದ್ದು, ಇಲ್ಲಿಯವರೆಗೂ ಸಾರ್ವಜನಿಕರಿಗೆ/ಪ್ರಯಾಣಿಕರಿಗೆ ತೊಂದರೆ ನೀಡಿದ ಮಂಗಳಮುಖಿಯರ ವಿರುದ್ಧ ಒಟ್ಟು 4 ಪ್ರಕರಣಗಳನ್ನು ದಾಖಲು ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿದೆ.<br>➢ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಸರದಿ ಸಾಲಿನಂತೆ ಅಪರಾಧ ವಿಭಾಗದ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಪ್ರತಿದಿನ |

| | | |
|---|---|---|
| | | ಬೆಳಿಗ್ಗೆ 5–00 ಗಂಟೆಯಿಂದ 8–30 ಗಂಟೆಯವರೆಗೆ ಕೆಎಸ್‌ಆರ್‌ಟಿಸಿ/ಬಿಎಂಟಿಸಿ ಬಸ್ ನಿಲ್ದಾಣದಲ್ಲಿ ವಿಶೇಷ ಗಸ್ತು ಕರ್ತವ್ಯಕ್ಕೆ ನೇಮಕ ಮಾಡಲಾಗಿರುತ್ತದೆ. |
| ಆ | ಅಂಡರ್‌ಪಾಸ್ ಮತ್ತು ಫ್ಲೈಓವರ್‌ನಲ್ಲಿ ಅಕ್ರಮಗಳನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಿಗೆ ದಿನಂಪ್ರತಿ ಆಗುವ ತೊಂದರೆಗಳಿಂದ ರಕ್ಷಣೆಯನ್ನು ಒದಗಿಸಲು ಯಾವ ರೀತಿಯ ಪೊಲೀಸ್ ವ್ಯವಸ್ಥೆ ಕಲ್ಪಿಸಲಾಗಿದೆ; ಎಷ್ಟು ಜನ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ;(ಸಂಪೂರ್ಣ ಮಾಹಿತಿ ನೀಡುವುದು) | ➢ ಅಂಡರ್‌ಪಾಸ್ ಮತ್ತು ಫ್ಲೈಓವರ್‌ನಲ್ಲಿ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಿಗೆ ದಿನಂಪ್ರತಿ ಆಗುವ ತೊಂದರೆಗಳಿಂದ ರಕ್ಷಣೆಯನ್ನು ಒದಗಿಸಲು ಉಪ್ಪಾರಪೇಟೆ ಪೊಲೀಸ್ ಹೊರ ಠಾಣೆಯಿಂದ ಹಗಲು/ರಾತ್ರಿ ಪಾಳಿಯಲ್ಲಿ ಒಟ್ಟು 5 ಪೊಲೀಸ್ ಸಿಬ್ಬಂದಿ ಹಾಗೂ ಕಡ್ಡಾಯವಾಗಿ 2 ಮಹಿಳಾ ಸಿಬ್ಬಂದಿಯನ್ನು ಕರ್ತವ್ಯಕ್ಕೆ ನಿಯೋಜಿಸಲಾಗುತ್ತಿರುತ್ತದೆ.<br>➢ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಸಿಬ್ಬಂದಿ ಮತ್ತು ಅಧಿಕಾರಿಗಳು ಹೊಯ್ಸಳ/ಚೀತಾ ವಾಹನಗಳಲ್ಲಿ ಗಸ್ತು ಮಾಡುತ್ತಿದ್ದು, ಪ್ರತಿ ಗಂಟೆಗೊಮ್ಮೆ ಚೀತಾ ಮತ್ತು ಹೊಯ್ಸಳ ಅಧಿಕಾರಿ ಮತ್ತು ಸಿಬ್ಬಂದಿಗಳು ಅಂಡರ್‌ಪಾಸ್ ಮತ್ತು ಫ್ಲೈಓವರ್‌ನ ಬಳಿ ಭೇಟಿ ನೀಡಿ ನಿಗಾವಣೆ ಮಾಡುತ್ತಿರುತ್ತಾರೆ. ಹಾಗೂ ಯಾರಾದರೂ ಅನುಮಾನಾಸ್ಪದ ವ್ಯಕ್ತಿ ಕಂಡುಬಂದಲ್ಲಿ ವಿಚಾರಣೆ ಮಾಡುವಂತೆ ಸೂಕ್ತ ತಿಳುವಳಿಕೆ ನೀಡಲಾಗಿದೆ.<br>➢ ಪ್ರತಿದಿನ ಅಂಡರ್‌ಪಾಸ್ ಮತ್ತು ಫ್ಲೈಓವರ್‌ಗಳಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಬೆಳಿಗ್ಗೆ ಹಾಗೂ ಸಂಜೆ ಒಬ್ಬ ಪಿಎಸ್‌ಐ ರವರನ್ನು ಮೇಲುಸ್ತುವಾರಿ ಅಧಿಕಾರಿಯನ್ನಾಗಿ ನೇಮಕ ಮಾಡಿ ಅವರೊಂದಿಗೆ ಅಪರಾಧ ವಿಭಾಗದ ಅಧಿಕಾರಿ/ಸಿಬ್ಬಂದಿಗಳನ್ನು ಫುಟ್ ಪೆಟ್ರೋಲಿಂಗ್ ಕರ್ತವ್ಯಕ್ಕೆ ನೇಮಕ ಮಾಡಲಾಗಿರುತ್ತದೆ. |
| ಇ | ಅಂಡರ್‌ಪಾಸ್ ಮತ್ತು ಫ್ಲೈಓವರ್‌ಗಳು ಸಂಜೆಯ ನಂತರ ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಾಡಾಗುತ್ತಿದ್ದು, ಸಾರ್ವಜನಿಕರ ಮಧ್ಯೆ ಇಂತಹ ಚಟುವಟಿಕೆ ಹೆಚ್ಚುತ್ತಿರುವುದು ಹಾಗೂ ಇಂತಹ ಸನ್ನಿವೇಶಗಳ ನಡುವೆ ನಡೆದು ಹೋಗುವುದು ಸಾರ್ವಜನಿಕರಿಗೆ ಮುಜುಗರವೆನಿಸುವುದರಿಂದ ಇಂತಹ ಅನೈತಿಕ ಚಟುವಟಿಕೆಗಳನ್ನು ನಿಲ್ಲಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಅಂಡರ್‌ಪಾಸ್ ಮತ್ತು ಫ್ಲೈಓವರ್‌ಗಳ ಬಳಿ ಅನೈತಿಕ ಚಟುವಟಿಕೆಗಳನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>➢ ದಿನದ 24 ಗಂಟೆಗಳು ಸಹ ಬೀಟ್ ಸಿಬ್ಬಂದಿ ಫುಟ್ ಪೆಟ್ರೋಲಿಂಗ್ ಮಾಡುತ್ತಿದ್ದು ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮ ವಹಿಸಲಾಗಿದೆ.<br>➢ ಮೆಜೆಸ್ಟಿಕ್ ಅಂಡರ್‌ಪಾಸ್ ಮತ್ತು ಫ್ಲೈಓವರ್‌ಗಳ ಮೇಲಿರುವ ಗೋಡೆಗಳ ಮೇಲೆ ಉಪ್ಪಾರಪೇಟೆ ಪೊಲೀಸ್ ಠಾಣೆ ಸಾರ್ವಜನಿಕ ಪ್ರಕಟಣೆ ಎಂದು ಬರೆಯಿಸಿ, ಅದರಲ್ಲಿ ಯಾರಾದರೂ ತೊಂದರೆ ನೀಡಿದ್ದಲ್ಲಿ, ಕೂಡಲೇ ಠಾಣಾ ದೂರವಾಣಿ ಸಂಖ್ಯೆ: 080–22942503 ಗೆ ಕರೆ ಮಾಡುವಂತೆ ತಿಳಿಸಲು ಸಾರ್ವಜನಿಕ ಪ್ರಕಟಣೆಯನ್ನು ಬರೆಯಿಸಿ, ದೂರವಾಣಿ ಸಂಖ್ಯೆಯನ್ನು ನಮೂದಿಸಿರುತ್ತದೆ. |

| | | |
|---|---|---|
| | | ➢ ಅಪರಾಧ ವಿಭಾಗದ ಅಧಿಕಾರಿ/ಸಿಬ್ಬಂದಿಗಳಿಗೆ ಹಾಗೂ ಬೀಟ್ ಕರ್ತವ್ಯದ ಅಧಿಕಾರಿ/ಸಿಬ್ಬಂದಿಗಳಿಗೆ ಅಂಡರ್‌ಪಾಸ್ ಹಾಗೂ ಫ್ಲೈಓವರ್‌ಗಳ ಬಳಿ ನಡೆಯುವ ಅನೈತಿಕ ಚಟುವಟಿಕೆಗಳ ಬಗ್ಗೆ ನಿಗಾ ಇಡುವಂತೆ ಹಾಗೂ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮತ್ತು ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕರ್ತವ್ಯ ನಿರ್ವಹಿಸಲು ಸೂಕ್ತ ತಿಳುವಳಿಕೆ ನೀಡಿರುತ್ತದೆ. |
| ಈ | ಮೆಜೆಸ್ಟಿಕ್ ಮತ್ತು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳು ರಾಜಧಾನಿಯ ಕೇಂದ್ರಸ್ಥಾನವಾಗಿರುವುದರಿಂದ ರಾಜ್ಯದ ಮೂಲೆ ಮೂಲೆಗಳಿಂದ ಬರುವ ಅಮಾಯಕ ಜನರಿಗೆ ಇಂತಹ ಅಹಿತಕರ ಅನೈತಿಕ ಘಟನೆಗಳಿಂದ ತೊಂದರೆಯಾಗುತ್ತಿರುವುದರಿಂದ ಇಂತಹ ಘಟನೆಗಳು ನಡೆಯದಂತೆ ಅವುಗಳನ್ನು ತಡೆಗಟ್ಟಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ? | ಮೆಜೆಸ್ಟಿಕ್ ಮತ್ತು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳು ರಾಜಧಾನಿಯ ಕೇಂದ್ರಸ್ಥಾನವಾಗಿರುವುದರಿಂದ ದೇಶ/ರಾಜ್ಯದ ಮೂಲೆ ಮೂಲೆಗಳಿಂದ ಬರುವ ಅಮಾಯಕ ಜನರಿಗೆ ಯಾವುದೇ ತೊಂದರೆಯಾಗದಂತೆ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿರುತ್ತದೆ. ದಿನದ 24 ಗಂಟೆಗಳೂ ಸಹ ಹೊಯ್ಸಳ ಮತ್ತು ಚೀತಾಗಳಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತು ನಿರ್ವಹಿಸಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮತ್ತು ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಮುನ್ನಚ್ಚರಿಕೆ ಕ್ರಮಗಳನ್ನು ವಹಿಸಲಾಗಿದೆ. ಆದಾಗ್ಯೂ ಯಾವುದೇ ಅಹಿತಕರ ಘಟನೆ ಕಂಡು ಬಂದಲ್ಲಿ ಅಂತಹವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತದೆ. |

ಹೆಚ್‌ಡಿ 507 ಎಸ್‌ಎಸ್‌ಟಿ 2023

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು